ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/26/2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:30-07-2024.

-:: ಸುತ್ತೋಲೆ ::-

ವಿಷಯ: 2024-25ನೇ ಸಾಲಿನ **ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ** ಪ್ರವೇಶ ಅವಧಿ ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:
1. ಪ್ರಾಂಶುಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಇವರ ಪತ್ರ ಸಂ. ಕೆಪಿಎಂ/32/ಪ್ರವೇಶ/2022-23/412, ದಿ:20-07-2024,
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:21-05-2024.
3. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:20-06-2024.

********

2024-25ನೇ ಸಾಲಿನ **ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ** ಉಲ್ಲೇಖ(3)ರಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ಸ್ವೀಕರಿಸಿ ದಿ:**19-07-2024** ರ ಒಳಗೆ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸಲು ತಿಳಿಸಲಾಗಿತ್ತು. ಉಲ್ಲೇಖ(1)ರ ಪ್ರಾಂಶುಪಾಲರ ಪತ್ರದಲ್ಲಿ ಅನೇಕ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಸಮಯಾವಕಾಶವನ್ನು ಕೇಳುತ್ತಿರುವುದರಿಂದ ಪ್ರವೇಶಾವಧಿಯನ್ನು ವಿಸ್ತರಿಸುವಂತೆ ಮನವಿ ಕೋರಿರುತ್ತಾರೆ. ಪರಿಶೀಲಿಸಲಾಗಿ, ಒಟ್ಟಾರೆ ಎಲ್ಲಾ ಸಂಸ್ಥೆಗಳ ಹಾಗೂ **ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್‌ನಲ್ಲಿ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳಿಗೆ ಕೊನೆಯ ದಿನಾಂಕ:06-08-2024ರ ವರೆಗೆ ಪ್ರವೇಶಾವಧಿಯನ್ನು** ವಿಸ್ತರಿಸಿ **ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು
3. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು
4. ದಿ ಆಕ್ಸ್‌ಫರ್ಡ್ ಪಾಲಿಟೆಕ್ನಿಕ್, ಬೆಂಗಳೂರು.
5. ನಾಡ್ಗೀರ್ ಪಾಲಿಟೆಕ್ನಿಕ್, ಬೆಂಗಳೂರು.

– ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
3) ಇ.ಆರ್.ಎಸ್ ವಿಭಾಗಕ್ಕೆ - ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
4) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5) ಕಡತಕ್ಕೆ.